# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬೀದರ

ಅಧಿಸೂಚನೆ ಸಂಖ್ಯೆ: 159/2018 ದಿನಾಂಕ: 17/12/2018

ವಿಷಯ : ಖಾಲಿ ಇರುವ ಶೀಘ್ರಲಿಪಿಗಾರರ, ಬೆರಳಚ್ಚುಗಾರರ, ಬೆರಳಚ್ಚು-ನಕಲುಗಾರರ ಮತ್ತು ಜವಾನರ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.

ಉಲ್ಲೇಖ :1. ಗೌರವಾನ್ವಿತ ಉಚ್ಚ ನ್ಯಾಯಾಲಯ ಬೆಂಗಳೂರು ರವರ ಪತ್ರ ಸಂಖ್ಯೆ LCA-II 128/2012 ದಿನಾಂಕ : 18-09-2018.
2. ಈ ಕಛೇರಿ ಟಿಪ್ಪಣಿ ಹಾಗೂ ಆದೇಶ ದಿನಾಂಕ: 17/12/2018.

**ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 31/01/2019 ರ ಸಂಜೆ 5-45 ಗಂಟೆ.**

ಅರ್ಜಿ ಸಲ್ಲಿಸಬೇಕಾದ ವಿಳಾಸ:- **ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೀದರ, ಜಿಲ್ಲೆ ಬೀದರ.**

**ಸೂಚನೆ:-** ಅಧಿಸೂಚನೆಯ ಪ್ರತಿಯನ್ನು ಜಿಲ್ಲಾ ನ್ಯಾಯಾಲಯದ ಅಂತರ್ಜಾಲದ ವಿಳಾಸ **https://districts.ecourts.gov.in/bidar** ರಲ್ಲಿ ಪಡೆಯಬಹುದು.

ಮೇಲ್ಕಂಡ ಅಧಿಸೂಚನೆಯ ಅನ್ವಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೀದರ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ , ಬೆರಳಚ್ಚುಗಾರರ, ಬೆರಳಚ್ಚು-ನಕಲುಗಾರರ ಮತ್ತು ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿಪಡಿಸಿದ ಅರ್ಜಿ ನಮೂನೆ ಬೆರಳಚ್ಚು/ಗಣಕೀಕೃತ ಪ್ರತಿಯಲ್ಲಿ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ರಂತೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ನೇಮಕಾತಿ ನಿಯಮಗಳಂತೆ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯನ್ನು ಪೂರೈಸಬೇಕಾಗುವುದು ಮತ್ತು ನಿರ್ದಿಷ್ಟ ಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.

**1. ಶೀಘ್ರ ಲಿಪಿಗಾರರು ( Stenographers)**

**i) ಒಟ್ಟು ಹುದ್ದೆಗಳ ಸಂಖ್ಯೆ : 07**

ii) ವೇತನ ಶ್ರೇಣಿ : 27650–650–29600–750–32600–850–36000–950–39800–1100–46400–1250–52650 ಹಾಗೂ ವಿಶೇಷ ಭತ್ಯೆ ನೀಡಲಾಗುವುದು.

**ಸ್ಥಳೀಯ ವೃಂದದ ಹುದ್ದೆಗಳು 05** : ( ಅಂದರೆ ಸಂವಿಧಾನದ 371–(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿ )

| ಮೀಸಲಾತಿ | ಇತರೆ | ಮಾ.ಸೈ | ಗ್ರಾಮೀಣ | ಅಂಗವಿಕಲ | **ಒಟ್ಟು** |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | – | 1 | 1 | – | **2** |
| ಪರಿಶಿಷ್ಟ ಜಾತಿ | – | – | – | 1* | **1** |
| ಪ್ರವರ್ಗ–III ಬಿ | 1 | – | – | – | **1** |
| ಪ್ರವರ್ಗ–II ಎ | – | – | 1 | – | **1** |
| **ಒಟ್ಟು** | **1** | **1** | **2** | **1** | **5** |

* ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.
ಮಾ.ಸೈ– ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.

**ಉಳಿದ ಮೂಲ ವೃಂದದ ಹುದ್ದೆಗಳು : 02**

| ಮೀಸಲಾತಿ | ಇತರೆ | ಗ್ರಾಮೀಣ | ಒಟ್ಟು |
|---|---|---|---|
| ಸಾಮಾನ್ಯ ಅಭ್ಯರ್ಥಿ | – | 1 | **1** |
| ಪ್ರವರ್ಗ **I** | 1 | – | **1** |
| **ಒಟ್ಟು** | **1** | **1** | **2** |

**ಶೀಘ್ರಲಿಪಿಗಾರರ ಹುದ್ದೆಗೆ ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ, ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಶೀಘ್ರಲಿಪಿಗಾರರ ಆಯ್ಕೆಯ ವಿಧಾನ:**

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :**

ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**2. ಬೆರಳಚ್ಚುಗಾರರು (Typist)**

i) **ಹುದ್ದೆಗಳ ಸಂಖ್ಯೆ : 02**

ii) ವೇತನ ಶ್ರೇಣಿ : 21400–500–22400–550–24600–600–27000–650–29600–750–32600–850–36000–950–39800–1100–42000 ಹಾಗು ವಿಶೇಷ ಭತ್ಯೆ ನೀಡಲಾಗುವುದು.

**ಸ್ಥಳೀಯ ವೃಂದದ ಹುದ್ದೆಗಳು 02** : ( ಅಂದರೆ ಸಂವಿಧಾನದ 371–(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿ )

| ಮೀಸಲಾತಿ | ಗ್ರಾಮೀಣ | ಮಹಿಳೆ | **ಒಟ್ಟು** |
|---|---|---|---|
| ಸಾಮಾನ್ಯ ಅಭ್ಯರ್ಥಿ | – | 1 | **1** |
| ಪ್ರವರ್ಗ II A | 1 | – | **1** |
| **ಒಟ್ಟು** | **1** | **1** | **2** |

**ಬೆರಳಚ್ಚುಗಾರರ ಹುದ್ದೆಗೆ ವಿದ್ಯಾರ್ಹತೆ**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲೂ ಹಿರಿಯ ಶ್ರೇಣಿ

ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಬೆರಳಚ್ಚುಗಾರರ ಆಯ್ಕೆಯ ವಿಧಾನ:**

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :**

ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**3. ಬೆರಳಚ್ಚು ನಕಲುಗಾರರು (Typist Copyist)**

i) **ಹುದ್ದೆಗಳ ಸಂಖ್ಯೆ : 05**

ii) ವೇತನ ಶ್ರೇಣಿ : 21400–500–22400–550–24600–600–27000–650–29600–750–32600–850–36000–950–39800–1100–42000 ಹಾಗು ವಿಶೇಷ ಭತ್ಯೆ ನೀಡಲಾಗುವುದು.

**ಸ್ಥಳೀಯ ವೃಂದದ ಹುದ್ದೆಗಳು 04** : ( ಅಂದರೆ ಸಂವಿಧಾನದ 371–(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿ )

| ಮೀಸಲಾತಿ | ಇತರೆ | ಗ್ರಾಮೀಣ | ಮಹಿಳೆ | **ಒಟ್ಟು** |
|---|---|---|---|---|
| ಸಾಮಾನ್ಯ | 1 | – | 1 | **2** |
| ಪರಿಶಿಷ್ಟ ಜಾತಿ | – | 1 | – | **1** |
| ಪ್ರವರ್ಗ–II ಎ | – | – | 1 | **1** |
| **ಒಟ್ಟು** | **1** | **1** | **2** | **4** |

**ಉಳಿದ ಮೂಲ ವೃಂದದ ಹುದ್ದೆಗಳು : 01**

| ಮೀಸಲಾತಿ | ಮಹಿಳೆ | ಒಟ್ಟು |
|---|---|---|
| ಸಾಮಾನ್ಯ | 1 | **1** |
| **ಒಟ್ಟು** | **1** | **1** |

**ಬೆರಳಚ್ಚು-ನಕಲುಗಾರ ಹುದ್ದೆಯ ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲೂ ಕಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಬೆರಳಚ್ಚು-ನಕಲುಗಾರ ಆಯ್ಕೆಯ ವಿಧಾನ:**

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ:**

ಸಾಮರ್ಥ್ಯ ಪರೀಕ್ಷೆಯು ಗರಿಷ್ಟ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**4. ಜವಾನರು ( Peon)**

i) **ಒಟ್ಟು ಹುದ್ದೆಗಳ ಸಂಖ್ಯೆ : 08**

ii) ವೇತನ ಶ್ರೇಣಿ : 17000-400-18600-450-20400-500-22400-550-24600-600-27000-650-28950 ಹಾಗೂ ಇತರೆ ಭತ್ಯೆಗಳು.

**ಸ್ಥಳೀಯ ವೃಂದದ ಹುದ್ದೆಗಳು 08** : ( ಅಂದರೆ ಸಂವಿಧಾನದ 371-(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿ )

| ಮೀಸಲಾತಿ | ಇತರೆ | ಗ್ರಾಮೀಣ | ಮಹಿಳೆ | ಒಟ್ಟು |
|---|---|---|---|---|
| ಸಾಮಾನ್ಯ ಅಭ್ಯರ್ಥಿ | 2 | – | 1 | **3** |
| ಪರಿಶಿಷ್ಟ ಜಾತಿ | 1 | – | – | **1** |
| ಪರಿಶಿಷ್ಟ ಪಂಗಡ | – | – | 1 | **1** |
| ಪ್ರವರ್ಗ II A | 1 | 1 | – | **2** |
| ಪ್ರವರ್ಗ III B | – | – | 1 | **1** |
| **ಒಟ್ಟು** | **4** | **1** | **3** | **8** |

**ಜವಾನರ ಹುದ್ದೆಗೆ ಶೈಕ್ಷಣಿಕ ವಿದ್ಯಾರ್ಹತೆ:**

7ನೇ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು ಹಾಗೂ ಕನ್ನಡ ಓದಲು ಮತ್ತು ಬರೆಯಲು ಬರಬೇಕು.

**ಜವಾನರ ಹುದ್ದೆಯ ಆಯ್ಕೆಯ ವಿಧಾನ:**

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ: ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

7 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳು ಒಟ್ಟು ಶೇಕಡಾವಾರು ನಮೂದು ಮಾಡಿರುವಂತಹ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ/ಷಟ್ಮಾಸಿಕ/ನೌಮಾಸಿಕ ಅಂಕಗಳಿದ್ದರೆ, ಎಲ್ಲಾ ತ್ರೈಮಾಸಿಕ/ಷಟ್ಮಾಸಿಕ/ನೌಮಾಸಿಕ ಅಂಕಗಳನ್ನು ಕ್ರೂಢೀಕರಿಸಿದ ಅಂಕಪಟ್ಟಿಯನ್ನು **ಮೂಲ ಅಂಕಪಟ್ಟಿಯ ಜೊತೆ** ಸದರಿ **ಅಂಕಪಟ್ಟಿಯನ್ನು** ಸಹ ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಧೃಢೀಕೃರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ

ಶಿಕ್ಷಣಾಧಿಕಾರಿಯವರಿಂದ ಧೃಢೀಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರು ಪಡಿಸತಕ್ಕದ್ದು ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು 7 ನೇ. ತರಗತಿಯ ಅಂಕಪಟ್ಟಿಯನ್ನು ಈ ಅಧಿಸೂಚನೆಯಲ್ಲಿ ನಮೂದಿಸಿದ ಅರ್ಜಿಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.

7 ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯಾಗಿರಬೇಕು ಮತ್ತು ಬೇರೆ ರೀತಿಯಲ್ಲಿ ಅಂದರೆ ಗ್ರೇಡ್ ಇದ್ದ ಅಂಕಪಟ್ಟಿಗಳನ್ನು ಲಗತ್ತಿಸಿದರೆ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**7 ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯು ಸಂಬಂಧಿತ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಶಾಲೆಯ ಮೊಹರನ್ನು ಹಾಕಿಸಿಕೊಂಡಿರಬೇಕು ಮತ್ತು ಆ ಅಂಕಪಟ್ಟಿಗೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲು ರುಜುವನ್ನು ಕಡ್ಡಾಯವಾಗಿ ಪಡೆದಿರಬೆಕು ಹಾಗೆ ಇಲ್ಲದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

## ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿ.ಅಸುಇ 43 ಸೇವನೆ 2008. ದಿನಾಂಕ 07–03–2012 ರನ್ವಯ ಆಯ್ಕೆಯಾದ ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು – ನಕಲುಗಾರರು ಕರ್ನಾಟಕ ಸರ್ಕಾರ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇ. 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು, ಆಯ್ಕೆಯಾದ ಮೂರು ತಿಂಗಳೊಳಗೆ ಪಾಸು ಮಾಡತಕ್ಕದ್ದು ತಪ್ಪಿದಲ್ಲಿ ಸದರಿ ನೇಮಕಾತಿಯನ್ನು ಅನರ್ಹಗೊಳಿಸಲಾಗುವುದು.

**ವಯೋಮಿತಿ:–**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು:

ಅ. ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಟ ವಯೋಮಿತಿ:

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ | 38 ವರ್ಷ |
| ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ : ಪ್ರವರ್ಗ–1 | 40 ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಮತ್ತು ಅಂಗವಿಕಲರಿಗೆ ನಿಯಮಗಳ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ಸೂಚನೆಗಳು:-**

1) ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳು, ಜಾತಿ ಪ್ರಮಾಣ ಪತ್ರ, ಕಲಂ 371 (ಜೆ) ಅರ್ಹತಾ ಪ್ರಮಾಣ ಪತ್ರ) ಹಾಗೂ ಇನ್ನಿತರೆ ಅವಶ್ಯಕ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು, ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಯು ತಿರಸ್ಕೃತವಾಗುತ್ತದೆ ಹಾಗು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

2) ಅಭ್ಯರ್ಥಿಗಳು ತಾವು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸಿದ್ದಾರೆ ಎನ್ನುವುದನ್ನು ಲಕೋಟೆ ಮೇಲೆ ಹಾಗೂ ಅರ್ಜಿಯ ಮೇಲೆ ಕಡ್ಡಾಯವಾಗಿ ಸ್ಪಷ್ಟವಾಗಿ ದೊಡ್ಡ ಅಕ್ಷರಗಳಲ್ಲಿ ನಮೂದಿಸತಕ್ಕದ್ದು.

3) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದುಕೊಂಡು, ಅರ್ಜಿಯ ಜೊತೆಗೆ ಲಗತ್ತಿಸಿ, ಆ ಅರ್ಜಿಯನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸತಕ್ಕದ್ದು.

4) ಅಭ್ಯರ್ಥಿಗಳು ನಿರ್ಧಿಷ್ಟಪಡಿಸಿದ ಅರ್ಜಿ ನಮೂನೆಯಲ್ಲಿ ತಮ್ಮ ಇತ್ತೀಚಿನ ಪಾಸ್ಪೋರ್ಟ್ ಸೈಜ್ ಭಾವಚಿತ್ರವನ್ನು ಅಂಟಿಸಿ, ಅದರ ಜೊತೆಗೆ ಸ್ವ-ವಿಳಾಸವಿರುವ ಮತ್ತು 10 ರೂಪಾಯಿಗಳ ಅಂಚೆ ಚೀಟಿಯನ್ನು ಲಗತ್ತಿಸಿದ ಲಕೋಟೆಯೊಂದಿಗೆ ಸಲ್ಲಿಸತಕ್ಕದ್ದು.

5) ಸ್ಥಳೀಯ ವೃಂದ (ಸಂವಿಧಾನದ 371-(ಜೆ) ಅನುಚ್ಛೇದದಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ) ಅಭ್ಯರ್ಥಿಗಳಿಗೆ ಸಂಬಂಧಿಸಿದ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರಿ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶ ಅರ್ಹತಾ ಪ್ರಮಾಣ ಪತ್ರಗಳು) ನಿಯಮಗಳು 2013 ರಡಿಯಲ್ಲಿ ಗೊತ್ತು ಪಡಿಸಿದಂತೆ ಅರ್ಜಿಯನ್ನು ಸಲ್ಲಿಸಿದ ದಿನಾಂಕದಂದು ಅಥವಾ ಅದಕ್ಕೂ ಮುಂಚಿತವಾಗಿಯೇ ಸಕ್ಷಮ ಪ್ರಾಧಿಕಾರವು ನೀಡುವ ಯುಕ್ತ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

6) ಅಭ್ಯರ್ಥಿಗಳನ್ನು ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಯಲ್ಲಿ ಪಡೆದ ಗುಣಗಳ ಆಧಾರದ ಮೇಲೆ ಅರ್ಹತಾ ಪರೀಕ್ಷೆಗೆ ಕರೆಯಬೇಕಾಗಿರುವುದರಿಂದ, ಅವರು ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಹೊಂದಿದ ಬಗ್ಗೆ ಸ್ವಯಂ ದೃಢೀಕೃತ ಅಂಕಪಟ್ಟಿಗಳ ನಕಲುಗಳನ್ನು ಕಡ್ಡಾಯವಾಗಿ ಅರ್ಜಿಯ ಜೊತೆಗೆ ಲಗತ್ತಿಸತಕ್ಕದ್ದು ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

7) ಜನ್ಮ ದಿನಾಂಕವನ್ನು ದೃಢೀಕರಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣಪತ್ರ ಸ್ವಯಂ ದೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

8) ಮೀಸಲಾತಿಯನ್ನು ಕೋರಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಸರ್ಕಾರದಿಂದ ನಿಗದಿ ಪಡಿಸಿದ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದ ಹಾಗೂ ಚಾಲ್ತಿಯಲ್ಲಿರುವ ಪ್ರಮಾಣ ಪತ್ರಗಳ ಸ್ವಯಂ ದೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

9) ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಮಹಿಳೆ, ಅಂಗವಿಕಲ, ಗ್ರಾಮೀಣ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗದ ಅರ್ಹ ಇತರ ಅಭ್ಯರ್ಥಿಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು.

10) ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕಾಗಿ ಆಹ್ವಾನಿಸಿದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

11) ಅಪೂರ್ಣ ಮತ್ತು ಕಡ್ಡಾಯವಾಗಿ ಲಗತ್ತಿಸಬೇಕಾದ ದಾಖಲಾತಿಗಳನ್ನು ಲಗತ್ತಿಸಲಾರದ ಹಾಗೂ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

12) ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಿಆಸುಇ/98/ಸೇನೆನಿ/2005, ದಿನಾಂಕ 10-8-2005 ರ ಪ್ರಕಾರ ನಿಗದಿತ ನಮೂನೆ 2 ರಲ್ಲಿ ಸಕ್ಷಮ ಅಧಿಕಾರಿಗಳಿಂದ ಪ್ರಮಾಣ ಪತ್ರ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿ, ಸ್ವಯಂ ದೃಢೀಕೃತ ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.

13) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ 2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ 1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರರವರಿಂದ ಪಡೆದ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ಛಾಯಾ ಪ್ರತಿಯನ್ನು ಸಲ್ಲಿಸತಕ್ಕದ್ದು.

14) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ- 1, ಪ್ರವರ್ಗ- 2ಎ , ಪ್ರವರ್ಗ- 2ಬಿ, ಪ್ರವರ್ಗ- 3ಎ ಗೆ ಸೇರಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪತ್ರಗಳ ಸ್ವಯಂ ದೃಢೀಕೃತ ಛಾಯಾ ಪ್ರತಿಗಳನ್ನು ಸಲ್ಲಿಸತಕ್ಕದ್ದು.

15) ಅಭ್ಯರ್ಥಿಗಳು ಕಡ್ಡಾಯವಾಗಿ ತಮ್ಮ ದೂರವಾಣಿ ಸಂಖ್ಯೆ ಅಥವಾ ಮೊಬೈಲ್ ಸಂಖ್ಯೆಯನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

16) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

17) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಧಿಕರಲ್ಲದ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

18) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಹಾಗೂ ಅಭ್ಯರ್ಥಿಯು ಅಭ್ಯಾಸ ಮಾಡಿದ ಶಾಲೆ/ವಿದ್ಯಾಲಯದಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

19) ಅಭ್ಯರ್ಥಿಗಳು ಅರ್ಜಿಯ ನಮೂನೆಯನ್ನು ಈ ಕಚೇರಿಯ ಜಾಲತಾಣವಾದ **https://districts.ecourts.gov.in/bidar** ನಲ್ಲಿ ಉಚಿತವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು.

20) ಯಾವುದೇ ಸಮಯದಲ್ಲಿ ಅಭ್ಯರ್ಥಿಗಳು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಯಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ಮೊಕದ್ದಮೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ವಿಶೇಷ ಸೂಚನೆಗಳು :-**

1) ಅರ್ಜಿಯೊಂದಿಗೆ ಲಗತ್ತಿಸಿರುವ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಬೇಕು. ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.
2) ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿಕೆಯ ಬಗ್ಗೆ ಪ್ರಭಾವ ಬೀರಿದಲ್ಲಿ, ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.
3) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವನ್ನು ಸಾರ್ವಜನಿಕ ರಜೆ ಎಂದು ಘೋಷಿಸಿದ ಪಕ್ಷದಲ್ಲಿ ಮುಂದಿನ ಕಚೇರಿ ಕೆಲಸದ ದಿನವನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ಪರಿಗಣಿಸಲಾಗುವುದು.
4) ಯಾವುದೇ ಅಭ್ಯರ್ಥಿಗೆ ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯತಕ್ಕದ್ದು ಮತ್ತು ಆ ಬಗ್ಗೆ ಯಾವುದೇ ಪತ್ರ ವ್ಯವಹಾರ ಮಾಡಲಾಗುವುದಿಲ್ಲ.
5) ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವು ದಿಲ್ಲ.
6) ಅಭ್ಯರ್ಥಿಗಳು ಈ ನೇಮಕಾತಿ ಪ್ರಾಧಿಕಾರ ( ಜಿಲ್ಲಾ ನ್ಯಾಯಾಲಯ, ಬೀದರ ) ನಿಗದಿ ಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅರ್ಜಿಗಳನ್ನು ತಮ್ಮ ಸ್ವಂತ ಹಸ್ತಾಕ್ಷರಗಳಿಂದ ಭರ್ತಿ ಮಾಡಿ ಸಲ್ಲಿಸತಕ್ಕದು, ಇಲ್ಲವಾದಲ್ಲಿ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸ್ಥಳ: ಬೀದರ.
ದಿನಾಂಕ: 17/12/2018

(ಮನಗೂಳಿ ಪ್ರೇಮಾವತಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೀದರ.

Prl. District & Sessions
BIDAR

ನಕಲನ್ನು ಗೌರವಗಳೊಂದಿಗೆ ಮಾಹಿತಿಗಾಗಿ:

1) ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಇವರಿಗೆ ಮುಖಪತ್ರದೊಂದಿಗೆ.

ಪ್ರಕಟಣೆಯ ನಕಲನ್ನು ಪ್ರಕಟಿಸುವ ಕುರಿತು:

1) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು: ಬೆಂಗಳೂರು ಗ್ರಾಮಿಣ : ಬಾಗಲಕೋಟೆ: ಬೆಳಗಾವಿ: ಬಳ್ಳಾರಿ: ಚಾಮರಾಜನಗರ: ಚಿಕ್ಕಮಗಳೂರು: ಚಿಕ್ಕಬಳ್ಳಾಪುರ: ಚಿತ್ರದುರ್ಗ: ದಾವಣಗೆರೆ: ಧಾರವಾಡ: ಗದಗ: ಕಲಬುರಗಿ: ಹಾಸನ: ಹಾವೇರಿ: ಕೋಲಾರ: : ಕೊಪ್ಪಳ: ಕೊಡಗು: ಮಡಿಕೇರಿ: ಮಂಡ್ಯ : ಮೈಸೂರು: ಮಂಗಳೂರು: ರಾಯಚೂರು: ರಾಮನಗರ: ಶಿವಮೊಗ್ಗ: ತುಮಕೂರು: ಉಡುಪಿ: ಉತ್ತರ ಕನ್ನಡ : ವಿಜಯಪುರ: ಯಾದಗಿರಿ.
2) ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬೀದರ.
3) ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ) (ಡಿ) ಪ್ರಕಾರ ಹೆಚ್ಚು ಪ್ರಸಾರ ಉಳ್ಳ ಎರಡು ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
4) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು- 560 059, ಇವರಿಗೆ ಪ್ರಕಟಣೆಯನ್ನು ಮುಂದಿನ ರಾಜ್ಯಪತ್ರದಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
5) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಬೀದರ ವ್ಯಾಪಕ ಪ್ರಚಾರಕ್ಕಾಗಿ.
6) ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ, ಬೀದರ.
7) ಜಿಲ್ಲಾ ಪೋಲೀಸ್ ಅಧೀಕ್ಷಕರು, ಬೀದರ ಜಿಲ್ಲೆ, ಬೀದರ.
8) ಜಿಲ್ಲಾ ಖಜಾನಾ ಅಧಿಕಾರಿಗಳು, ಬೀದರ ಜಿಲ್ಲೆ, ಬೀದರ.
9) 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೀದರ್, (ಬಸವಕಲ್ಯಾಣ ಪೀಠ)
10) ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಬೀದರ.
11) ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಮನಾಬಾದ: ಬಸವಕಲ್ಯಾಣ: ಭಾಲ್ಕಿ, ಔರಾದ್ ಬಿ.
12) ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಬೀದರ್, ಬಸವಕಲ್ಯಾಣ ಹುಮನಾಬಾದ ಮತು ಔರಾದ್-ಬಿ.
13) ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಭಾಲ್ಕಿ. ಔರಾದ.
14) ಜಿಲ್ಲಾ ನ್ಯಾಯಾಲಯದ ಗಣಕ ವಿಭಾಗಕ್ಕೆ ಜಿಲ್ಲಾ ನ್ಯಾಯಾಲಯದ ಅಂತರ್ಜಾಲದಲ್ಲಿ ಪ್ರಕಟಣೆಗಾಗಿ.
15) ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.
16) ಆಡಳಿತ ವಿಭಾಗದ ಕಡತಕ್ಕೆ.
17) ಹೆಚ್ಚುವರಿ ಪ್ರತಿ.

# ಅರ್ಜಿ ನಮೂನೆ

## ಬೀದರ ಜಿಲ್ಲೆಯ ನ್ಯಾಯಾಲಯದಲ್ಲಿ ಖಾಲಿ ಇರುವ ________________ ಹುದ್ದೆಗೆ ಅರ್ಜಿ

ಗೆ,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೀದರ.

ಅಭ್ಯರ್ಥಿಯ ಇತ್ತೀಚಿನ ಸ್ವಯಂ ದೃಢೀಕೃತ ಪಾಸ್‌ಪೋರ್ಟ ಅಳತೆಯ ಭಾವ ಚಿತ್ರ ಅಂಟಿಸುವುದು

ಮಾನ್ಯರೇ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ : 159/2018 : ದಿನಾಂಕ 14-12-2018 ರ ಪ್ರಕಟಣೆ ಮೇರೆಗೆ ನಾನು ________________ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 1 | ಅಭ್ಯರ್ಥಿಯ ಪೂರ್ಣ ಹೆಸರು ( ದಪ್ಪ ಅಕ್ಷರಗಳಲ್ಲಿ ) | | | |
| 2 | ತಂದೆ / ಗಂಡನ ಹೆಸರು | | | |
| 3 | ತಾಯಿಯ ಹೆಸರು | | | |
| 4 | ಸಂಪೂರ್ಣ ಅಂಚೆ ವಿಳಾಸ | | | |
| 5 | ದೂರವಾಣಿ / ಮೊಬೈಲ್ ಸಂಖ್ಯೆ | | | |
| 6 | ಜನ್ಮ ದಿನಾಂಕ : (ಸೂಕ್ತ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸುವುದು ) | | | |
| 7 | ವಯಸ್ಸು ( ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ದಂದು ಅಭ್ಯರ್ಥಿಯ ವಯಸ್ಸು ) | ವರ್ಷಗಳು | ತಿಂಗಳು | ದಿನಗಳು |
| 8 | ಲಿಂಗ | ಪುರುಷ | ಮಹಿಳೆ | |
| 9 | ರಾಷ್ಟ್ರೀಯತೆ | | | |
| 10 | ಧರ್ಮ ಮತ್ತು ಜಾತಿ | | | |
| 11 | ವೈವಾಹಿಕ ಸ್ಥಿತಿ | ವಿವಾಹಿತ | ಅವಿವಾಹಿತ | |
| 12 | ವಿವಾಹಿತರಾಗಿದ್ದಲ್ಲಿ ಒಂದಕ್ಕಿಂತ ಹೆಚ್ಚು ಜೀವಂತ ಗಂಡ: ಹೆಂಡತಿ ಇದ್ದಾರೆಯೇ? | | | |
| 13 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರಾ? | | | |
| 14 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರೂ ಸೇವೆಯಿಂದ ವಜಾ ಆಗಿದ್ದೀರಾ? ಅಥವಾ ತೆಗೆದುಹಾಕಲ್ಪಟ್ಟಿದ್ದೀರಾ? | | | |
| 15 | ನೀವು ಸರ್ಕಾರಿ ಸೇವೆಯಲ್ಲಿ ಇದ್ದಲ್ಲಿ ಅದರ ವಿವರ (ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಲಗತ್ತಿಸುವುದು ) | | | |

| 16 | ಶೈಕ್ಷಣಿಕ ವಿದ್ಯಾರ್ಹತೆ (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಲಗತ್ತಿಸತಕ್ಕದ್ದು) | | | | |
|---|---|---|---|---|---|
| | ವಿದ್ಯಾರ್ಹತೆ | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ | ಗರಿಷ್ಠ ಅಂಕಗಳು | ಪಡೆದುಕೊಂಡ ಅಂಕಗಳು | ಶೇಕಡಾ ವಾರು |
| i | 7 ನೇ ತರಗತಿ | | | | |
| ii | ಎಸ್.ಎಸ್.ಎಲ್.ಸಿ | | | | |
| iii | ಕನ್ನಡ ಬೆರಳಚ್ಚು ಜೂನಿಯರ್ | | | | |
| iv | ಇಂಗ್ಲೀಷ್ ಬೆರಳಚ್ಚು ಜೂನಿಯರ್ | | | | |
| v | ಕನ್ನಡ ಬೆರಳಚ್ಚು ಸೀನಿಯರ್ | | | | |
| vi | ಇಂಗ್ಲೀಷ್ ಬೆರಳಚ್ಚು ಸೀನಿಯರ್ | | | | |
| vii | ಕನ್ನಡ ಶೀಘ್ರಲಿಪಿ ಸೀನಿಯರ್ | | | | |
| viii | ಇಂಗ್ಲೀಷ್ ಶೀಘ್ರಲಿಪಿ ಸೀನಿಯರ್ | | | | |
| ix | ಇತರ ಯಾವುದೇ ವಿದ್ಯಾರ್ಹತೆ | | | | |

| 17 | ಅಭ್ಯರ್ಥಿಯು ಯಾವ ವರ್ಗದ ಮೀಸಲಾತಿ ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸುತ್ತಿರುವರು? (ಕೋರುವ ಮೀಸಲಾತಿಯನ್ನು ✓ ಚಿಹ್ನೆ ಯಿಂದ ಗುರುತಿಸಿ ಅದರ ಪ್ರಮಾಣ ಪತ್ರವನ್ನು ಸ್ವಯಂ ದೃಢೀಕೃತನಕಲನ್ನು ಲಗತ್ತಿಸಬೇಕು | ಸಾಮಾನ್ಯ | ಪ.ಜಾತಿ | ಪ. ಪಂಗಡ | ಪ್ರವರ್ಗ- I |
|---|---|---|---|---|---|
| | | | | | |
| | | II-ಎ | II-ಬಿ | III-ಎ | III-ಬಿ |
| | | | | | |

| 18 | ಅಭ್ಯರ್ಥಿಯು ಯಾವ ಮೀಸಲಾತಿ ಅಡಿಯಲ್ಲಿ ಬರುತ್ತಾರೊ ಅದನ್ನು ✓ ಚಿಹ್ನೆಯಿಂದ ಗುರುತಿಸಿ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು. | ಇತರೆ | ಗ್ರಾಮೀಣ | ಮಹಿಳೆ | ಮಾ.ಸೈ | ಅಂಗವಿಕಲ |
|---|---|---|---|---|---|---|
| | | | | | | |

| 19 | ಅಭ್ಯರ್ಥಿಯು ಹೈದ್ರಾಬಾದ್-ಕರ್ನಾಟಕ 371(ಜೆ) ಪ್ರದೇಶದ ಅಭ್ಯರ್ಥಿಯೇ? ಹೌದು ಎಂದಾದಲ್ಲಿ ಸದರಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು. | |
|---|---|---|
| 20 | ಲಗತ್ತಿಸಿದ ದಾಖಲೆಗಳು: | |

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿವೆಯೆಂದು ಪ್ರಮಾಣೀಕರಿಸುತ್ತೇನೆ. ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಮತ್ತು ಕಾನೂನಿನ ಅನುಸಾರ ನನ್ನ ಮೇಲೆ ಸೂಕ್ತ ಕ್ರಮವನ್ನು ಕೈಗೊಳ್ಳಬಹುದಾಗಿದೆ ಎಂದು ಈ ಮೂಲಕ ಘೋಷಿಸುತ್ತೇನೆ.

ಸ್ಥಳ:
ದಿನಾಂಕ:

ಅಭ್ಯರ್ಥಿಯ ಸಹಿ

ಸೂಚನೆ: ಅಭ್ಯರ್ಥಿಗಳು ಅರ್ಜಿಯ ಜೊತೆಗೆ 10 ರೂಪಾಯಿಗಳ ಅಂಚೆ ಚೀಟಿಯನ್ನು ಲಗತ್ತಿಸಿದ ಸ್ವವಿಳಾಸವಿರುವ ಲಕೋಟೆಯನ್ನು ಲಗತ್ತಿಸಿ ಅದರ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ತಪ್ಪಿದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು.